**ಸಾಕ್ಷಿಯನ್ನು ದಿ:16.12.2019 ರಂದು ಕರೆಸಿ ಪ್ರಮಾಣ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿಯ ಪರ ಶ್ರೀ ಟಿ. ಆರ್ ವಕೀಲರಿಂದ:**

ಈಗ ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ನನ್ನ ಹೆಬ್ಬೆಟ್ಟನ್ನು ಹಾಕಿರುತ್ತೇನೆ.

ದಿ:26.11.2016 ರಂದು ನನ್ನ ಗಂಡ ನನ್ನ ಪರವಾಗಿ ಮಾಡಿಕೊಟ್ಟ ನೊಂದಾಯಿತ ದಾನ ಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-1 ಎಂದು, ದಾವಾ ಸ್ವತ್ತಿಗೆ ಸಂಬಂದಿಸಿದ ಒಂದು ಡಿಮ್ಯಾಂಡ್ ರಿಜಿಸ್ಟರ್ನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಮನೆ ಕಟ್ಟಲು ಬಲಮಂದೆ ಮಂಡಲ್ ಪಂಚಾಯತಿಯವರು ನನ್ನ ಮಾವನ ಪರವಾಗಿ ನೀಡಿದ ಪರವಾನಗಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಗುಲ್ಲಹಳ್ಳಿ ಗ್ರಾಮ ಪಂಚಾಯತಿಯವರು ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂದಿಸಿದಂತೆ ನೀಡಿದ ಇ-ಖಾತಾ ಪ್ರತಿಯನ್ನು ಹಾಜರುಪಡಿಸಿದ್ದು ಅವು 3 ಪುಟಗಳನ್ನು ಒಳಗೊಂಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-4 ಎಂದು, ಪ್ರತಿವಾದಿಗಳ ವಿರುದ್ದ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನೀಡಿದ ದೂರಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ದಾವಾ ಸ್ವತ್ತಿಗೆ ಸಂಬಂದಿಸಿದ ಒಟ್ಟು 13 ಕಂದಾಯ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ 18 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯವಿಚಾರಣೆ: ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)**

**ಓ ಹೇ ಕೇ ಸರಿ ಇದೆ.**

**(ದೀಪು ಬಿ.ಸಿ.)**
**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ಬಂಗಾರಪೇಟೆ.**